ಕರ್ನಾಟಕ ಸರ್ಕಾರ

ಸಂಖ್ಯೆ: ಇಡಿ 122 ಟಿಪಿಇ 2012

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ, 6ನೇ ಮಹಡಿ,
ಬೆಂಗಳೂರು, ದಿನಾಂಕ: 09-10-2013.

ಇವರಿಂದ,
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬೆಂಗಳೂರು- 560 001.

ಇವರಿಗೆ,
ನಿರ್ದೇಶಕರು,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ,
ಬೆಂಗಳೂರು-560 001.

ಮಾನ್ಯರೇ,

ವಿಷಯ: ಬೋಧಕ/ಬೋಧಕೇತರ ಸಿಬ್ಬಂದಿಗಳಿಗೆ ಕಾಲ್ಪನಿಕ ವೇತನ ನಿಗದಿಪಡಿಸುವ ಹಾಗೂ ಇನ್ನಿತರ ಸೌಲಭ್ಯಗಳನ್ನು ನೀಡುವ ಕುರಿತು.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 09.10.2013ರಂದು ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಇವರ ಕೊಠಡಿಯಲ್ಲಿ ಜರುಗಿದ ಸಭೆಯಲ್ಲಿ ತಿಳಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ ಅನುದಾನಪೂರ್ವ ಸೇವೆಯನ್ನು ಪಿಂಚಣಿ ಹಾಗೂ ಇತರೆ ಸೌಲಭ್ಯಗಳಿಗೆ ಪರಿಗಣಿಸುವ ಕುರಿತಂತೆ ದಿನಾಂಕ: 11.10.2013ರಂದು 11-00 ಘಂಟೆಗೆ ಅಪರ ಕಾರ್ಯದರ್ಶಿಗಳು, ಕಾನೂನು ಇಲಾಖೆ, ಇವರ ನೇತೃತ್ವದಲ್ಲಿ ಜರುಗಲಿರುವ ಸಭೆಗೆ ಪ್ರತಿಯೊಂದು ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಉಚ್ಛ ನ್ಯಾಯಾಲಯದ ಆದೇಶವನ್ನು ಜಾರಿಗೊಳಿಸಿದಲ್ಲಿ ತಗಲುವ ಆರ್ಥಿಕ ಹೊರೆಯ ಸಂಸ್ಥೆವಾರು ವಿವರಗಳನ್ನು ಕೂಡಲೇ ಸರ್ಕಾರಕ್ಕೆ ಸಲ್ಲಿಸುವಂತೆ ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,
(ಬಿ.ನಾಗಭೂಷಣ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).

ಪಿ.ಟಿ.ಓ.

"ಅತ್ಯಂತ ಜರೂರು"

ಹಿಂಬರಹ ಸಂ:ಡಿಟಿಇ 83 ಇಎಸ್‌ಟಿ 4(ಬಿ)2012 ದಿನಾಂಕ: 09.10.2013

ಮೇಲ್ಕಂಡ ಸರ್ಕಾರದ ಪತ್ರದ ಪ್ರತಿಯನ್ನು ಈ ಕೆಳಕಂಡವರಿಗೆ ಮುಂದಿನ ಕ್ರಮಕ್ಕಾಗಿ ರವಾನಿಸುತ್ತಾ ಸದರಿ ಪತ್ರದಲ್ಲಿ ಸರ್ಕಾರವು ಕೋರಿರುವ ಮಾಹಿತಿಯನ್ನು ತುರ್ತಾಗಿ ಮೇಲ್ ಸಂ: dtekar @ hotmail.com ಗೆ ಕಳುಹಿಸಿಕೊಡುವಂತೆ ತಿಳಿಸಲಾಗಿದೆ.

ಆಡಳಿತಾಧಿಕಾರಿ.
09/10

ಇವರಿಗೆ.

1) ಎಲ್ಲಾ ಅನುದಾನಿತ ಪಾಲಿಟೆಕ್ನಿಕ್ ಹಾಗೂ ಇಂಜಿನಿಯರಿಂಗ್ ಕಾಲೇಜು ಪ್ರಾಚಾರ್ಯರುಗಳಿಗೆ ತುರ್ತು ಕ್ರಮಕ್ಕಾಗಿ.

2) ಇ-ಆಡಳಿತ ವಿಭಾಗಕ್ಕೆ ಈ ದಿನವೇ ಪ್ರಕಟಿಸಲು ತಿಳಿಸಲಾಗಿದೆ.

3) ಲೆಕ್ಕಾಧಿಕಾರಿಗಳು ಟಿ.ಬಿ.ಎಸ್. ವಿಭಾಗಕ್ಕೆ.